**ದಿ : 25-09-2025 ರಂದು ಸಾಕ್ಷಿ ದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು : 1ನೇ ಎದುರುದಾರರ ಮತ್ತು ಅವರ ಪರ ವಕೀಲರು ಗೈರು ಹಾಜರು. ಆದ್ದರಿಂದ 1ನೇ ಎದುರುದಾರರ ಪರವಾಗಿ ಸಾಕ್ಷಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಪಾಟೀ ಸವಾಲು : 2ನೇ ಎದುರುದಾರರ ಪರ ವಕೀಲರಿಂದ**

ಅಪಘಾತವಾದ ದಿನ ನಾನು ಹಾಲು ತರಲು ನಡೆದುಕೊಂಡು ಹೋಗುತ್ತಿದ್ದೆ. ಅಪಘಾತವು ಸಾಯಂಕಾಲ 07-00ರ ಸಮಯದಲ್ಲಿ ಸಂಭವಿಸಿರುತ್ತದೆ. ಅಪಘಾತವಾದ ದಿನ ಆಸ್ಪತ್ರೆಯಲ್ಲಿ ಪೊಲೀಸರಿಗೆ ದೂರನ್ನು ನಾನೇ ನೀಡಿರುತ್ತೇನೆ. ನಾನು ಗಣೇಶ ಮೂರ್ತಿಯ ಮೆರವಣಿಗೆಯಲ್ಲಿ ಹೋಗುತ್ತಿದ್ದಾಗ ಅಪಘಾತವಾಗಿದೆ ಎಂದರೆ ಸರಿಯಲ್ಲ. ನನಗೆ ಅಪಘಾತಪಡಿಸಿದ ವಾಹನ ನನ್ನ ಹಿಂದಿನಿಂದ ಬಂದು ಡಿಕ್ಕಿ ಮಾಡಿರುತ್ತದೆ. ಡಿಕ್ಕಿ ಮಾಡಿದ ವಾಹನ ಸಂಖ್ಯೆ ನನಗೆ ಗೊತ್ತಿಲ್ಲ. ಅಪಘಾತವು ಪಿಕ್ ಅಪ್ ವಾಹನದ ಚಾಲಕನ ತಪ್ಪಿನಿಂದ ಸಂಭವಿಸಿಲ್ಲ ಎಂದರೆ ಸರಿಯಲ್ಲ. ಅಪಘಾತವು ನೇರ ರಸ್ತೆಯಲ್ಲಿ ಸಂಭವಿಸಿರುತ್ತದೆ. ಅಪಘಾತದ ಸ್ಥಳದಲ್ಲಿ ಬೇರೆ ಯಾವುದೇ ರಸ್ತೆಗಳು ಬಂದು ಸೇರುವುದಿಲ್ಲ.

ಅಪಘಾತದ ನಂತರ ಮೊದಲು ಕುಂದಾಪುರದ ಸರ್ಕಾರಿ ಆಸ್ಪತ್ರೆಯಲ್ಲಿ ನಂತರ ಕುಂದಾಪುರ ಚಿನ್ಮಯಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇನೆ. ಆಸ್ಪತ್ರೆಯಲ್ಲಿ 12 ದಿನಗಳ ಕಾಲ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ. ಯಾವ ದಿನಾಂಕದಿಂದ ಯಾವ ದಿನಾಂಕದವರೆಗೆ ಚಿಕಿತ್ಸೆ ಪಡೆದಿದ್ದೇನೆ ಮತ್ತು ಯಾವ ದಿನಾಂಕದಂದು ಬಿಡುಗಡೆಯಾಗಿದ್ದೇನೆ ಎಂದು ಹೇಳಲು ಆಗುವುದಿಲ್ಲ. ಚಿಕಿತ್ಸೆ ಪೂರ್ಣವಾಗಿದೆ ಎಂದರೆ ಸರಿಯಲ್ಲ. ನನಗೆ ಆಗಿದ್ದ ಎಲ್ಲಾ ಗಾಯಗಳು ವಾಸಿಯಾಗಿವೆ ಎಂದರೆ ಸರಿಯಲ್ಲ. ಅಪಘಾತದಿಂದ ಆದ ಗಾಯಗಳಿಂದ ನನ್ನ ಭವಿಷ್ಯಕ್ಕೆ ತೊಂದರೆ ಇಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ಆದ ಗಾಯಗಳಿಂದ ನನಗೆ ಅಂಗನ್ಯೂನ್ಯತೆ ಆಗಿಲ್ಲ ಎಂದರೆ ಸರಿಯಲ್ಲ. ಅಪಘಾತದ ಪೂರ್ವದಲ್ಲಿ ನಾನು ಯಾವ ರೀತಿ ಆರೋಗ್ಯವಾಗಿದ್ದನೋ ಅದೇ ರೀತಿ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ನನಗೆ ಅನುಕೂಲವಾಗುವಂತೆ ವೈದ್ಯರು ಅಂಗನ್ಯೂನ್ಯತಾ ಪ್ರಮಾಣ ಪತ್ರ ನೀಡಿದ್ದಾರೆ ಎಂದರೆ ಸರಿಯಲ್ಲ. ನನಗೆ ಆದ ಗಾಯಗಳಿಗೆ ಮತ್ತು ಅಪಘಾತಕ್ಕೆ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಅಪಘಾತದ ಸಮಯದಲ್ಲಿ ನನಗೆ 53 ವರ್ಷ ವಯಸ್ಸಾಗಿತ್ತು. ಅಪಘಾತದ ಸಂದರ್ಭದಲ್ಲಿ ನಾನು ಕೂಲಿ ಕೆಲಸ ಮಾಡುತ್ತಿದ್ದೆ ಮತ್ತು ದಿನಕ್ಕೆ ರೂ.700/- ಸಂಬಳ ಪಡೆಯುತ್ತಿದೆ. ಅಪಘಾತದ ಸಂದರ್ಭದಲ್ಲಿ ನನಗೆ 53 ವರ್ಷ ವಯಸ್ಸಾದ ಬಗ್ಗೆ ಕೂಲಿ ಕೆಲಸ ಮಾಡಿ ಪ್ರತಿದಿನ ರೂ.700/- ಸಂಬಳ ಪಡೆಯುತ್ತಿದ್ದ ಬಗ್ಗೆ ದಾಖಲೆ ಹಾಜರು ಮಾಡಿಲ್ಲ ಎಂದರೆ ಸರಿ. ನಾನು ಕೂಲಿ ಕೆಲಸ ಮಾಡುತ್ತಿರಲಿಲ್ಲ ಮತ್ತು ಹಣ ಸಂಪಾದನೆ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಹಾಜರು ಮಾಡಿರುವ ರಶೀದಿಗಳಲ್ಲಿ

ತೋರಿಸಿದಷ್ಟು ಹಣವನ್ನು ನಾನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣಾ ಪತ್ರದಲ್ಲಿ ಹೇಳಿದಷ್ಟು ಹಣ ಪ್ರಯಾಣಕ್ಕಾಗಿ, ಊಟೋಪಚಾರಕ್ಕಾಗಿ, ಸಹಾಯಕರಿಗೆ ಹಾಗೂ ಇನ್ನಿತರ ಸಾಂದರ್ಭಿಕ ಖರ್ಚಾಗಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯಲು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆ</u>** : ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇ**

**ಸದಸ್ಯರು, ಹೆಚ್ಚುವರಿ ಮೋಟಾರು ವಾಹನ**
**ಅಪಘಾತ ಪರಿಹಾರ ಮಂಡಳಿ, ಕುಂದಾಪುರ**